APRIL 23, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಮಕ್ಕಳ ವಿಭಾಗದಲ್ಲಿ, ಹೊಸದಾಗಿ 30 ಹಾಸಿಗೆ ಸಾಮರ್ಥ್ಯದ ಎನ್.ಐ.ಸಿ.ಯು– ನವಜಾತ ಶಿಶುಗಳ ತೀವ್ರ ನಿಗಾ ಘಟಕ ಸ್ಥಾಪಿಸಲಾಗುತ್ತಿದೆ, ಆ ಮೂಲಕ ಅವಧಿಗೂ ಮುನ್ನ ಜನಿಸಿದ, ತೂಕ ಕಡಿಮೆ ಇರುವ ಹಾಗೂ ಉಸಿರಾಟದ ತೊಂದರೆಯುಳ್ಳ ನವಜಾತ ಶಿಶುಗಳ ಚಿಕಿತ್ಸೆ, ಆರೈಕೆಯೊಂದಿಗೆ, ಆರೋಗ್ಯ ಕಾಳಜಿ ವಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದ ಬಿ.ವೈ. ರಾಘವೇಂದ್ರ ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎನ್.ಐ.ಸಿ.ಯು ಸ್ಥಾಪನೆಯಿಂದ, ನವಜಾತ ಶಿಶುಗಳ ಆರೋಗ್ಯ ರಕ್ಷಣೆಗೆ ಸಹಕಾರಿಯಾಗಲಿದೆ. ಮೆಗ್ಗಾನ್ ಆಸ್ಪತ್ರೆ, ಸಮೀಪದ 5 ಜಿಲ್ಲೆಗಳ ಆರೋಗ್ಯಾಕಾಂಕ್ಷಿಗಳಿಗೆ ಉತ್ತಮ ಸೇವೆ ನೀಡುತ್ತಿದ್ದು, ಸ್ವಚ್ಛತೆಯಲ್ಲಿ ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ ಎಂದರು.

<><><>

ರಾಜ್ಯದ ಉತ್ತರ ಒಳನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ತಾಪಮಾನ ಏರಿಕೆ ಕಂಡು ಬಂದಿದೆ. ಕರಾವಳಿ ಜಿಲ್ಲೆಗಳಲ್ಲಿ ಮುಂದಿನ ಒಂದು ವಾರದ ವರೆಗೆ, ಗರಿಷ್ಠ ಉಷ್ಣಾಂಶ 35 ರಿಂದ 37 ಡಿಗ್ರಿ ಸೆಲ್ಸಿಯಸ್ ಇರಲಿದೆ ಎಂದು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಬೆಂಗಳೂರು, ಭಾರತೀಯ ಹವಾಮಾನ ಇಲಾಖೆ, ಹಿರಿಯ ವಿಜ್ಞಾನಿ ಡಾಕ್ಟರ ಸಿ.ಎಸ್ ಪಾಟೀಲ್ .

<><><>

ಡಾಕ್ಟರ ಸಿ.ಎಸ್ ಪಾಟೀಲ್ ಧ್ವನಿ– 42 ಸೆಕೆಂದುಗಳು

<><><>

ಸಾರ್ವಜನಿಕರು ತೀವ್ರ ಬಿಸಿಲಿನ ಸಂದರ್ಭ, ಓಡಾಟ ಕಡಿಮೆ ಮಾಡಬೇಕು, ದೇಹದಲ್ಲಿ ನೀರಿನ ಅಂಶ ಕಡಿಮೆಯಾಗದಂತೆ ಎಚ್ಚರ ವಹಿಸಬೇಕು. ಅಸ್ವಸ್ಥತೆ ಕಂಡು ಬಂದಲ್ಲಿ ಕೂಡಲೇ ಸಮೀಪದ ಸರ್ಕಾರಿ ಆಸ್ಪತ್ರೆ ಸಂಪರ್ಕಿಸಿ, ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಿರ್ದೇಶಿಸಿದೆ. ತಾಪಮಾನ ಹೆಚ್ಚಳದ ಹಿನ್ನೆಲೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನೀಡಿರುವ ಸಲಹೆಗಳನ್ನು ನಾಗರಿಕರು ಪಾಲಿಸುವಂತೆ ಸಚಿವ ದಿನೇಶ ಗುಂಡೂರಾವ್ ಕೋರಿದ್ದಾರೆ.

<><><>

ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ, ಹುಲಿಗಿ ಗ್ರಾಮದ, ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಜಾತ್ರಾ ಮಹೋತ್ಸವ ಮೇ 10 ರಿಂದ 14 ರ ವರೆಗೆ ಜರುಗಲಿದ್ದು, ಬಿರು ಬೇಸಿಗೆ ಹಿನ್ನೆಲೆ ಭಕ್ತಾದಿಗಳಿಗೆ ಸೂಕ್ತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ,

ಒಟ್ಟು 44 ನೀರಿನ ಟ್ಯಾಂಕರಗಳ ಮೂಲಕ ಕುಡಿಯುವ ನೀರಿನ ಪೂರೈಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಡಾಕ್ಟರ ಸುರೇಶ ಬಿ. ಇಟ್ನಾಳ್ ತಿಳಿಸಿದ್ದಾರೆ.

<><><>

ಗದಗ ಜಿಲ್ಲೆಯಲ್ಲಿ, ಪ್ರಸ್ತುತ ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ಪ್ರಥಮಾದ್ಯತೆ ಮೇರೆಗೆ ಇಲಾಖಾಧಿಕಾರಿಗಳು ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶಿಸಿದ್ದಾರೆ.

<><><>

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ-1 ರ ಫಲಿತಾಂಶ ಪ್ರಕಟಗೊಂಡಿದ್ದು, ವಿದ್ಯಾರ್ಥಿಗಳು, ಫಲಿತಾಂಶವನ್ನು www. kar results. nic.in ಜಾಲತಾಣ ಹಾಗೂ ಕರ್ನಾಟಕ ಒನ್ ಮೊಬೈಲ್ ಆಪ್ ಮೂಲಕ ಪಡೆಯಬಹುದು.

<><><>

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ 75 ನೇ ಘಟಿಕೋತ್ಸವ, ವಿಶ್ವವಿದ್ಯಾಲಯ ಆವರಣದ ಗಾಂಧಿ ಭವನದಲ್ಲಿ ಇಂದು ಆಯೋಜಿತವಾಗಿದೆ. ಕುಲಾಧಿಪತಿ, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರ ಘನ ಉಪಸ್ಥಿತಿಯಲ್ಲಿ ಪದವಿ ಪ್ರದಾನ ಸಮಾರಂಭ ಪ್ರಗತಿಯಲ್ಲಿದೆ. ಶಿಕ್ಷಣ ತಜ್ಞ ಅಚ್ಯುತ ಸಮಂತ, ಕರ್ನಾಟಕ ಚುನಾವಣಾ ಆಯುಕ್ತ ಜಿ.ಎಸ್ ಸಂಗ್ರೇಶಿ ಹಾಗೂ ಹುಬ್ಬಳ್ಳಿಯ ಮಜೇಥಿಯಾ ಫೌಂಡೇಶನ್ ಸ್ಥಾಪಕ ಜಿತೇಂದ್ರ ಡಿ. ಮಜೇಥಿಯಾ ವಿಶ್ವವಿದ್ಯಾಲಯ ಕೊಡಮಾಡುವ ಗೌರವ ಡಾಕ್ಟರೇಟ್ ಗೆ ಭಾಜನರಾಗಿದ್ದಾರೆ.

<><><>

ಇಂದು ಸಾಹಿತಿ, ಕನ್ನಡ ಸಾಹಿತ್ಯ ಲೋಕದ ಹಾಸ್ಯ ಮಾಂತ್ರಿಕ ಎಂದೇ ಪ್ರಸಿದ್ಧರಾದ ಬೀಚಿ-ರಾಯಸಂ ಭೀಮಸೇನ ರಾವ್ ಅವರ ಜನ್ಮದಿನ. ಕಥೆ, ಕಾದಂಬರಿ ಹಾಗೂ ನಾಟಕಗಳ ಮೂಲಕ ಬೀಚಿ ಅವರು ನಾಡಿಗೆ ನೀಡಿದ ಸಾಹಿತ್ಯಿಕ ಕೊಡುಗೆಗಳನ್ನು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸ್ಮರಿಸಿದ್ದು, ಗೌರವಪೂರ್ವಕ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಬಾಗಲಕೋಟೆ ಜಿಲ್ಲೆಯಲ್ಲಿ, ಜಾನುವಾರುಗಳಿಗೆ ಕಾಲು-ಬಾಯಿ ರೋಗ ತಡೆಗಟ್ಟಲು, ಇಂದಿನಿಂದ ಮೇ 22 ರ ವರೆಗೆ 9ನೇ ಸುತ್ತಿನ, ಉಚಿತ ಲಸಿಕಾ ಅಭಿಯಾನ ಆಯೋಜಿಸಲಾಗಿದೆ. ಜಾನುವಾರುಗಳಿಗೆ ಚರ್ಮಗಂಟು ರೋಗದ ಲಸಿಕೆ ಹಾಗೂ ನಾಯಿಗಳಿಗೆ ರೇಬಿಸ್ ಲಸಿಕೆಯನ್ನು ಸಹ ಉಚಿತವಾಗಿ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

<><><>

ಚಾಮರಾಜನಗರ ಜಿಲ್ಲೆ, ಮಲೆ ಮಹದೇಶ್ವರ ವನ್ಯಜೀವಿಧಾಮದ ಬಫರ್ ವಲಯ, ಅಜ್ಜೀಪುರ ಸಮೀಪದ, ಉಡುತೊರೆ ಜಲಾಶಯದ ಕೆಸರಿನಲ್ಲಿ ಸಿಲುಕಿದ್ದ ಮೂರು ಆನೆಗಳನ್ನು ರಕ್ಷಿಸಲಾಗಿದ್ದು, ಇವುಗಳಲ್ಲಿ ಒಂದು ಹೆಣ್ಣಾನೆ ತೀವ್ರ ನಿತ್ರಾಣದಿಂದ, ಚಿಕಿತ್ಸೆ ನೀಡಿದರೂ ಫಲಕಾರಿಯಾಗದೆ ಮೃತಪಟ್ಟಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>